ಕರ್ನಾಟಕ ಸರ್ಕಾರ

*ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.*

ಸಂಖ್ಯೆ:ಪಪೂಶಿ/ಶೈಶಾ-04/ ಸು-10/2016-17 ದಿನಾಂಕ: 30-11-2016

ಸುತ್ತೋಲೆ

ವಿಷಯ: ಪ್ರಥಮ ಪಿಯುಸಿ ತರಗತಿಗಳ ವಾರ್ಷಿಕ ಪರೀಕ್ಷೆಯ ಮುದ್ರಣಕ್ಕಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಿದ್ಯಾರ್ಥಿಗಳಿಂದ ಸಂಗ್ರಹಿಸುವ ಪರೀಕ್ಷಾ ಶುಲ್ಕ ಕುರಿತು.

ಉಲ್ಲೇಖ: ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ.

****

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ನಡೆಸುವ ವಾರ್ಷಿಕ ಪರೀಕ್ಷೆಗಾಗಿ ವಿದ್ಯಾರ್ಥಿಗಳಿಂದ ವಿವಿಧ ರೀತಿಯ ಶುಲ್ಕಗಳನ್ನು ಜಿಲ್ಲೆಗಳಲ್ಲಿ ಜಿಲ್ಲಾ ಉಪನಿರ್ದೇಶಕರುಗಳು ತಮ್ಮ ಹಂತದಲ್ಲಿಯೇ ನಿಗಧಿಪಡಿಸಿ ವಿದ್ಯಾರ್ಥಿಗಳಿಂದ ಪಡೆಯುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಪ್ರಶ್ನೆ ಪತ್ರಿಕೆಗಳ ಮುದ್ರಣ ಮಾಡಿ ವಿದ್ಯಾರ್ಥಿಗಳಿಗೆ ಸರಬರಾಜು ಮಾಡಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಏಕರೂಪದ ಶುಲ್ಕವನ್ನು ನಿಗಧಿಪಡಿಸ ಬೇಕಾಗಿರುತ್ತದೆ.

ಅದ್ದರಿಂದ ಪ್ರಥಮ ಪಿಯುಸಿಯ ವಾರ್ಷಿಕ ಪರೀಕ್ಷೆಗೆ ಹಾಗೂ ಪೂರಕ ಪರೀಕ್ಷೆಗೆ ಸಂಬಂಧಿಸಿದಂತೆ, ಪ್ರತಿ ವಿದ್ಯಾರ್ಥಿಗೆ 6 ವಿಷಯಗಳ ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆ ಮುದ್ರಿಸಿ ಸರಬರಾಜು ಮಾಡಲು ತಗಲುವ ವೆಚ್ಚದ ಘಟಕ/ಭಾಗದ ಪೂರ್ಣ ಮಾಹಿತಿಯನ್ನು ಕುರಿತು ಮರುಟಾಪಲಿನಲ್ಲಿ ವರದಿ ನೀಡಲು ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

ಮುಂದಿನ ಕ್ರಮಕ್ಕಾಗಿ:-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ನಿರ್ದೇಶಕರ ಅಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
3. ಇ-ಅಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪ್ರತಿ